1) **30/11/1988**
Swearing-in Ceremony of Shri Veerendra Patil, Chief Minister and other Ministers: Rs. 23,432-00

2) **6/12/1989**
Expansion of Ministry Rs. 25,600-00

3) **17/10/1990**
Swearing-in-Ceremony of Shri S. Bangarappa, Chief Minister. Rs. 24,619-00

4) **20/10/90**
Expansion of Ministry Rs. 21,040-00

5) **18/11/90**
Expansion of Ministry Rs. 27,290-00

6) **27/7/91**
Expansion of Ministry Rs. 22,564-00

7) 20/11/1992
Swearin-in Ceremony of Shri Veerappa Moily, Chief Minister and other Ministers, and other Ministers Rs. 33,556-00

ಕನ್ನಡ ಅಭಿವೃದ್ಧಿ ಪ್ರಾಧಿಕಾರ.

501 - ಶ್ರೀ ಎಂ. ನಾರಾಯಣ ಸ್ವಾಮಿ (ಬೇತಮಂಗಲ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಎಂದಿನಿಂದ ಪ್ರಾರಂಭವಾಗಿದೆ?

ಆ) ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕಾಗಿ ಇದುವರೆವಿಗೂ ಸಿಬ್ಬಂದಿ ವೇತನ, ಪ್ರವಾಸಭತ್ಯೆ, ದಿನಭತ್ಯೆ, ದೂರವಾಣಿ, ಪೆಟ್ರೋಲ್, ಇತರೆ ವೆಚ್ಚ ಎಷ್ಟು?

ಇ) ಪ್ರಾಧಿಕಾರಕ್ಕೆ ಹೆಚ್ಚಿನ ಅಧಿಕಾರ ನೀಡುವ ಉದ್ದೇಶವಿದೆಯೇ?

ಈ) ಕನ್ನಡ ಅಭಿವೃದ್ಧಿ ಪ್ರಾಧಿಕಾರವು ರೂಪಿಸಿಕೊಂಡಿರುವ ಕಾರ್ಯ ವಿಧಾನಗಳೇನು?

ಉ) 1992-93ನೇ ಸಾಲಿನಲ್ಲಿ ಪ್ರಾಧಿಕಾರವು ಖರ್ಚು ಮಾಡಲು ಉದ್ದೇಶಿಸಿರುವ ಮೊತ್ತವೆಷ್ಟು?

ಶ್ರೀ ಎಂ. ವೀರಪ್ಪ ಮೊಯ್ಲಿ (ಮುಖ್ಯ ಮಂತ್ರಿಗಳು):

ಅ) ದಿನಾಂಕ 6.2.1992 ರಿಂದ

ಆ) ರೂ. 2,32,598-00

ಇ) ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಅನುಬಂಧದಲ್ಲಿ ಕೊಟ್ಟಿದೆ.

ಉ) ಸದ್ಯಕ್ಕೆ ರೂ. 11.13 ಲಕ್ಷಗಳು.

ಅನುಬಂಧ

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಪ್ರಕಾರ್ಯಗಳು, ಕಾರ್ಯವಿಧಾನಗಳು

1. ಪ್ರಾಧಿಕಾರದ ಪ್ರಕಾರ್ಯಗಳು:

ಎ) ಸರ್ಕಾರದ ಆಡಳಿತ ಭಾಷಾ ನೀತಿಯ ಅನುಷ್ಠಾನದ ಬಗ್ಗೆ ಬೇರೆ ಬೇರೆ ಇಲಾಖೆಗಳು ಸಾರ್ವಜನಿಕ ಉದ್ದಿಮೆಗಳು, ಎಲ್ಲ ಸಂಸ್ಥೆಗಳು ಮತ್ತು ಸ್ಥಳೀಯ ನಿಕಾಯಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಸಂಸ್ಥೆಗಳು ಕೈಗೊಂಡಿರುವ ಕ್ರಮಗಳ ಪರಿಶೀಲನೆ ಮಾಡುವುದು?

ಬಿ) ಸರ್ಕಾರ ಅಂಗೀಕರಿಸಿರುವ ಡಾ. ಸರೋಜಿನಿ ಮಹಿಷಿ ವರದಿಯ ಶಿಫಾರಸುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಲು ಅಗತ್ಯವಾದ ಕ್ರಮ ಕೈಗೊಳ್ಳುವುದು.

ಸಿ) ಕನ್ನಡವನ್ನು ಆಡಳಿತೇ ಭಾಷೆಯನ್ನಾಗಿ ಜಾರಿಗೆ ತರುವಲ್ಲಿ ಇರುವ ಅಡಚಣೆಗಳನ್ನು ಗುರುತಿಸಿ ಅವುಗಳ ನಿವಾರಣೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದು.

ಡಿ) ಕನ್ನಡ ಪರೀಕ್ಷೆಗಳ (ಸೇವಾ ಪರೀಕ್ಷೆ) ಪದ್ಧತಿಯನ್ನು, ಕನ್ನಡ ಜ್ಞಾನವನ್ನು ತಿಳಿಯಲು ನಡೆಸಲಾಗುವ ಪರೀಕ್ಷೆಗಳನ್ನು ಈಗಿರುವ ಅಥವಾ ಮುಂದೆ ರೂಪಿಸಬಹುದಾದ ಸಂಬಂಧಪಟ್ಟ ಪಠ್ಯಕ್ರಮಗಳ ಸಹಿತವಾಗಿ ಕಾಲಕಾಲಕ್ಕೆ ಪರಿಶೀಲಿಸುವದು ಮತ್ತು ಅಗತ್ಯವೆನಿಸಿದರೆ ಇದನ್ನು ಪರಿಷ್ಕರಿಸಲು, ಮಾರ್ಪಡಿಸಲು ಅಥವಾ ನವೀಕರಿಸಲು ರಾಜ್ಯ ಸರ್ಕಾರಕ್ಕೆ ಸಲಹೆ ನೀಡುವುದು, ಕನ್ನಡ ಬೆರಳಚ್ಚು ಯಂತ್ರಗಳ ತಯಾರಿಕೆ, ಖರೀದಿ ಮತ್ತು ವಿತರಣೆ ಬಗ್ಗೆ ಕಛೇರಿ ಆಧುನೀಕರಣದಲ್ಲಿ ಬಳಸಲಾಗುವ ಕಂಪ್ಯೂಟರ್, ಟೆಲಿಪ್ರಿಂಟರ್ಸ್, ಟೆಲಿಕ್ಸ್ ಇತ್ಯಾದಿ ಆಧುನಿಕ ಉಪಕರಣಗಳಲ್ಲಿ ಕನ್ನಡವನ್ನು ಬಳಸುವ ಬಗ್ಗೆ ಅಧ್ಯಯನ ಹಾಗೂ ಸಮಾಲೋಚನೆ ನಡೆಸುವುದು, ಮತ್ತು ಈ ಸಂಬಂಧದಲ್ಲಿ ಕನ್ನಡವನ್ನೇ ಸಂಪೂರ್ಣವಾಗಿ ಬಳಸುವುದಕ್ಕೆ ಪ್ರೇರಕವಾಗಬಹುದಾದ ನಿರ್ಣಯಗಳನ್ನು ಕೈಗೊಂಡು ಅದನ್ನು ಕಾರ್ಯಗತಗೊಳಿಸುವುದು.

ಇ) ಅಧಿಕಾರಿಗಳಿಗೆ, ನೌಕರರಿಗೆ ಕನ್ನಡ ಬಳಕೆಗೆ ಅನುಕೂಲವಾದ ತರಬೇತಿ ಕಾರ್ಯಕ್ರಮ, ಶಿಬಿರ, ಪ್ರದರ್ಶನ ಮತ್ತು ವಿಚಾರ ಸಂಕೀರ್ಣಗಳನ್ನು ಏರ್ಪಡಿಸುವುದು ಮತ್ತು ಕನ್ನಡೇತರರಿಗೆ ಕನ್ನಡ ಕಲಿಕೆ ಕಾರ್ಯಕ್ರಮಗಳನ್ನು ಮತ್ತು ಆ ಸಂಬಂಧ ಪಠ್ಯಕ್ರಮ, ಸಾಹಿತ್ಯ ಸಿದ್ಧಪಡಿಸುವುದು.

ಎಫ್) ಕನ್ನಡ ಅಭಿವೃದ್ಧಿಗೆ ಸಂಬಂಧಿಸಿದ ಉಪಯುಕ್ತ ಪ್ರಕಟಣೆಗಳನ್ನು ಪ್ರಕಟಿಸುವುದು. ಖರೀದಿಸುವುದು ಮತ್ತು ವಿತರಿಸುವುದು.

ಜಿ) ಕಛೇರಿಗಳಲ್ಲಿ ಬಳಸಲಾಗುವ ಎಲ್ಲಾ ನಮೂನೆಗಳು ಕನ್ನಡದಲ್ಲಿ ಮುದ್ರಣವಾಗುವಂತೆ ನೋಡಿಕೊಳ್ಳುವುದು ಹಾಗೂ ಕನ್ನಡೇತರ ಭಾಷೆಗಳಲ್ಲಿ ಇರಲೇಬೇಕಾದ ನಮೂನೆ, ಪ್ರಕಟಣೆ ಮತ್ತು ರಿಜಿಸ್ಟರುಗಳನ್ನು ಪರಿಶೀಲಿಸಿ, ಮುದ್ರಣಕ್ಕೆ ಅನುಮತಿ ನೀಡುವುದು.

ಎಚ್) ರಾಜ್ಯದಲ್ಲಿ ಹೆಚ್ಚು ಜನಸಂಪರ್ಕ ಹೊಂದಿರುವ ಕೇಂದ್ರ ಸರ್ಕಾರದ ಕಛೇರಿಗಳು, ಬ್ಯಾಂಕುಗಳು, ಅಂಚೆಕಛೇರಿಗಳು ಮತ್ತು ಮತ್ತಿತರ ಕಚೇರಿಗಳು, ಉದ್ದಿಮೆಗಳಲ್ಲಿ ದೈನಂದಿನ ಬಳಕೆಯಲ್ಲಿರುವ ನಮೂನೆ, ನೋಟೀಸು ನಾಮಫಲಕಗಳಲ್ಲಿ ಕೇಂದ್ರ ಸರ್ಕಾರದ ಭಾಷಾ ನೀತಿಗೆ ಅನುಗುಣವಾಗಿ ಪ್ರಾದೇಶಿಕ ಭಾಷೆಯನ್ನು ಬಳಸಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸುವುದು ಮತ್ತು ಈ ಸಂಬಂಧ ಅಂಥ ಕಛೇರಿಗಳೊಂದಿಗೆ ಪತ್ರವ್ಯವಹಾರ ಕೈಗೊಳ್ಳುವುದು.

ಐ) ಆಡಳಿತ ಪೂರಕ ಸಾಹಿತ್ಯ ರಚನೆ, ಪರಿಷ್ಕರಣೆ, ಮುದ್ರಣ ಮತ್ತು ವಿತರಣೆ ವಿಷಯಗಳಲ್ಲಿ ತೀರ್ಮಾನ ಕೈಗೊಳ್ಳುವುದು ಮತ್ತು ಈ ಕ್ಷೇತ್ರದಲ್ಲಿನ ಪ್ರಗತಿಯನ್ನು ಆಗಿಂದಾಗ್ಗೆ ಸಮೀಕ್ಷಿಸಿ ಸೂಕ್ತ ಕ್ರಮ ಸೂಚಿಸುವುದು.

2. ತಜ್ಞರ ಸೇವೆಗಳನ್ನು ಪಡೆದುಕೊಳ್ಳುವುದು

ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ಪ್ರಾಧಿಕಾರವು ಅವಶ್ಯವಾದರೆ, ತಾನು ಸೂಕ್ತವೆಂದು ಭಾವಿಸಲಬಹುದಾದಂಥ ವಿಧಾನದಲ್ಲಿ ತಜ್ಞರ ಸೇವೆಗಳನ್ನು ಅಥವಾ ನೆರವನ್ನು ಪಡೆದುಕೊಳ್ಳಬಹುದು.

3. ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.

ಪ್ರಾಧಿಕಾರವು ಪ್ರತಿವರ್ಷವೂ ಕನ್ನಡ ಅಭಿವೃದ್ಧಿಗಾಗಿ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸಿ ಅದನ್ನು ರಾಜ್ಯ ಸರ್ಕಾರಕ್ಕೆ ಅನುಮೋದನೆಗಾಗಿ ಕಳುಹಿಸಬೇಕು. ರಾಜ್ಯ ಸರ್ಕಾರವು ಯೋಜನೆಗಳಲ್ಲಿ ಮತ್ತು ಕಾರ್ಯಕ್ರಮಗಳಲ್ಲಿ ಮಾರ್ಪಾಟುಗಳನ್ನು ಮಾಡಿ ಅಥವಾ ಮಾರ್ಪಾಟಿಲ್ಲದೆ ಅನುಮೋದಿಸಬಹುದು.

4. ಮಾಹಿತಿ ಪಡೆದುಕೊಳ್ಳುವುದು.

ಪ್ರಾಧಿಕಾರವು, ಈ ಆದೇಶದ ಉದ್ದೇಶಗಳೀಗಾಗಿ, ರಾಜ್ಯ ಸರ್ಕಾರದ ಯಾವ ಅಧಿಕಾರಿಯಿಂದಾದರೂ ಮಾಹಿತಿಯನ್ನು ಕೋರಬಹುದು ಮತ್ತು ಪಡೆದುಕೊಳ್ಳಬಹುದು. ಅಂಥ ಅಧಿಕಾರಿಯು ಪ್ರಾಧಿಕಾರವು ಕೋರಬಹುದಾದ ಮಾಹಿತಿಯನ್ನು ತಪ್ಪದೆ ಒದಗಿಸಬೇಕು.

5. ಪ್ರಾಧಿಕಾರದ ನಿರ್ದೇಶನಗಳು :

ಪ್ರಾಧಿಕಾರವು, ಈ ಆದೇಶದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ತನ್ನ ಯೋಜನೆಯನ್ನು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಬಗ್ಗೆ ಇಲಾಖೆಗಳಿಗೆ ನೀಡಬಹುದಾದ ನಿರ್ದೇಶನಗಳನ್ನು ಇಲಾಖೆಗಳು ಪಾಲಿಸಬೇಕು. (ಆದೇಶ ಸಂಖ್ಯೆ ಡಿಪಿಎಆರ್ 183 ಕೆಒಎಲ್ 92, ದಿನಾಂಕ 11ನೇ ನವೆಂಬರ್ 1992ರ ಪ್ರಕಾರ).

ಅಬಕಾರಿ ಗುಪ್ತ ದಳ ನಡೆಸಿದ ದಾಳಿ.

502 - ಶ್ರೀ ಎಂ. ನಾರಾಯಣ ಸ್ವಾಮಿ (ಬೇತಮಂಗಲ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಬಕಾರಿ ಗುಪ್ತ ದಳಗಳಿಂದ ಕಳೆದ ಒಂದು ವರ್ಷದಲ್ಲಿ, ನಡೆಸಿದ ದಾಳಿಗಳೆಷ್ಟು?

ಆ) ಇದರಲ್ಲಿ ಬೆಂಗಳೂರು ಜಿಲ್ಲೆಯಲ್ಲಿ ನಡೆದ ದಾಳಿಗಳೆಷ್ಟು? (ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಗಳ ಪ್ರತ್ಯೇಕ ಮಾಹಿತಿ ಕೊಡುವುದು):

ಇ) ಇದರಿಂದಾಗಿ ವಶಪಡಿಸಿಕೊಂಡ ವಾಹನಗಳೆಷ್ಟು; ಹಾಗೂ ಇವುಗಳನ್ನು ವಿಲೇವಾರಿ ಮಾಡುವ ಪದ್ಧತಿಯೇನು?

ಶ್ರೀ ಎಂ. ವೀರಪ್ಪ ಮೊಯ್ಲಿ (ಮುಖ್ಯ ಮಂತ್ರಿಗಳು):

ಅ) 35,804.

ಆ) ಬೆಂಗಳೂರು ನಗರ 4,761

ಬೆಂಗಳೂರು (ಗ್ರಾಂ) 391